76

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಫೋರ್ ಫಿಫ್ಟಿ ವಿಂಡ್ ಪವರ್ ಪ್ರೈವೇಟ್ ಲಿಮಿಟೆಡ್ ರವರಿಗೆ ಹಂಚಿಕೆಯಾಗಿರುವ 17.00 ಮೆ.ವ್ಯಾ. ಪವನ ವಿದ್ಯುತ್ ಸಾಮರ್ಥ್ಯದಿಂದ 2.00 ಮೆ.ವ್ಯಾ. ಸಾಮರ್ಥ್ಯವನ್ನು ಮೆ: ಗ್ರೀನ್ ಇನ್ಫ್ರಾ ವಿಂಡ್ ಪವರ್ ಸೊಲ್ಯೂಷನ್ಸ್ ಲಿಮಿಟೆಡ್ ರವರಿಗೆ ವರ್ಗಾಯಿಸಿ, ಸದರಿ ಸಾಮರ್ಥ್ಯವನ್ನು 28.50 ಮೆ.ವ್ಯಾ.ಗೆ ಹೆಚ್ಚಿಸುವ ಕುರಿತು

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 145 ಎನ್‌ಸಿಇ 2006 ದಿನಾಂಕ: 16.10.2006.

2) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: KRED/08/GIWPSL-2to28.50 MW (Four FF-17 MW)2012/2034 ದಿನಾಂಕ: 21/24.07.2012 ಮತ್ತು KRED/08/GIWPSL-2to28.5 MW/2012/2808 ದಿನಾಂಕ: 31.10/02.11.2012.

3) ದಿನಾಂಕ 21.09.2012 ಹಾಗೂ ದಿ.03.11.2012ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

ಪ್ರಸ್ತಾವನೆ:-

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ : ಫೋರ್ ಫಿಫ್ಟಿ ವಿಂಡ್ ಪವರ್ ಪ್ರೈವೇಟ್ ಲಿಮಿಟೆಡ್ ರವರಿಗೆ ಚಿತ್ರದುರ್ಗ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ 17.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಲವು ನಿಬಂಧನೆಗೊಳಪಟ್ಟು ಹಂಚಿಕೆ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ : ಫೋರ್ ಫಿಫ್ಟಿ ವಿಂಡ್ ಪವರ್ ಪ್ರೈವೇಟ್ ಲಿಮಿಟೆಡ್ ರವರಿಗೆ ಚಿತ್ರದುರ್ಗ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಮಂಜೂರಾಗಿರುವ ಒಟ್ಟು 17.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಆದೇಶದ ಕ್ರಮ ಸಂಖ್ಯೆ (1) ರಲ್ಲಿಯ ಚಿತ್ರದುರ್ಗ ಜಿಲ್ಲೆ ಶಿವನಕೆರೆ, ಕಲಹಾಳು, ಹಗ್ಗೆರೆ ಮತ್ತು ಚಿಕ್ಕಬೆನ್ನೂರು ಗ್ರಾಮಗಳಲ್ಲಿ ಮಂಜೂರಾಗಿರುವ ಭಾಗಶಃ ಸಾಮರ್ಥ್ಯವಾದ 2.00 ಮೆ.ವ್ಯಾ. ಸಾಮರ್ಥ್ಯವನ್ನು ಮೆ: ಗ್ರೀನ್ ಇನ್ಫ್ರಾ ವಿಂಡ್ ಪವರ್ ಸೊಲ್ಯೂಷನ್ಸ್ ಲಿಮಿಟೆಡ್ ರವರಿಗೆ ವರ್ಗಾಯಿಸಿ, ಸದರಿ ಸಾಮರ್ಥ್ಯವನ್ನು 28.50 ಮೆ.ವ್ಯಾ.ಗೆ ಹೆಚ್ಚಿಸಲು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ ಹಾಗೂ ಸದರಿ ಯೋಜನಾ ಪ್ರದೇಶವು ಅರಣ್ಯೇತರ ಪ್ರದೇಶವಾಗಿದ್ದು, ಉತ್ಪಾದಿಸಿದ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡಲಾಗುವುದೆಂದು ಮತ್ತು ಯೋಜನೆಯನ್ನು ಡಿಸೆಂಬರ್ 2015 ರೊಳಗಾಗಿ ಅನುಷ್ಠಾನಗೊಳಿಸಲಿರುವುದಾಗಿ ತಿಳಿಸಿರುತ್ತಾರೆ. ಅಲ್ಲದೆ ಕಂಪನಿಯು ವರ್ಗಾವಣೆ ಶುಲ್ಕ ಪಾವತಿಸಿದ್ದು, ಸಾಮರ್ಥ್ಯ ಹೆಚ್ಚಳ ಶುಲ್ಕವನ್ನು ಪಾವತಿಸಬೇಕಾಗಿರುವುದಾಗಿ ವರದಿ ಮಾಡಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ 03-11-2012ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಸದರಿ ಯೋಜನೆಯನ್ನು ಒಂದು ವರ್ಷದೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು ತಪ್ಪಿದಲ್ಲಿ ಯೋಜನೆಯು ತಂತಾನೇ ರದ್ದಾಗುವುದೆಂಬ ಷರತ್ತಿಗೊಳಪಟ್ಟು ಹಂಚಿಕೆ ಸಮಿತಿಯು ಪ್ರಸ್ತಾವನೆಯನ್ನು ಶಿಫಾರಸ್ಸಿಸಿದೆ. ಅದರಂತೆ ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 235 ಎನ್‌ಸಿಇ 2012.**
**ಬೆಂಗಳೂರು, ದಿನಾಂಕ: 08-05-2013**

ಮೆ : ಫೋರ್ ಫಿಫ್ಟಿ ವಿಂಡ್ ಪವರ್ ಪ್ರೈವೇಟ್ ಲಿಮಿಟೆಡ್ ರವರಿಗೆ ಚಿತ್ರದುರ್ಗ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಮಂಜೂರಾಗಿರುವ 17.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಆದೇಶದ ಕ್ರಮ ಸಂಖ್ಯೆ (1) ರಲ್ಲಿಯ ಚಿತ್ರದುರ್ಗ ಜಿಲ್ಲೆ ಶಿವನಕೆರೆ, ಕಲಹಾಳು, ಹಗ್ಗೆರೆ ಮತ್ತು ಚಿಕ್ಕಬೆನ್ನೂರು ಗ್ರಾಮಗಳಲ್ಲಿ ಮಂಜೂರಾಗಿರುವ ಭಾಗಶಃ ಸಾಮರ್ಥ್ಯವಾದ 2.00 ಮೆ.ವ್ಯಾ ಸಾಮರ್ಥ್ಯವನ್ನು ಮೆ: ಗ್ರೀನ್ ಇನ್ಫ್ರಾ ವಿಂಡ್ ಪವರ್ ಸೊಲ್ಯೂಷನ್ಸ್ ಲಿಮಿಟೆಡ್ ರವರಿಗೆ ವರ್ಗಾಯಿಸಲು ಹಾಗೂ ಸದರಿ ಸಾಮರ್ಥ್ಯವನ್ನು 28.50 ಮೆ.ವ್ಯಾ.ಗೆ ಈ ಕೆಳಗಿನ ಕಂಡಿಕೆಗಳಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಲು ಅನುಮೋದನೆ ನೀಡಲಾಗಿದೆ.

......2

Copy Attested under RTI
Asst. Public Information Officer
KREDL

| Geographical Area Details of the Project | Sanctioned capacity in MW | Enhancement Proposed in MW | No. of WTGs & rating in KW | Total capacity including proposed enhancement in MW |
|---|---|---|---|---|
| The Identified area is a non-forest land as per SOI map. Further, it consists of independent hillocks and are mostly oriented in NW-SE direction. This area has two peaks and are located on the North-East of Todranahalu village. The proposed area is covered in the following geographical co-ordinates:<br>**Latitude**: 14°8'0"- 14°9'43" N<br>**Longitude**: 76°16'16"- 76°17'46" E<br>**Ridge peaks:** 835, 825m AMSL.,<br>**Toposheet** No: 57 B/8 | 3.6 | 11.4 | 10 Nos. x 1500 Kw | 15 |

1. **ಮೆ:: ಗ್ರೀನ್ ಇನ್ಫ್ರಾ ವಿಂಡ್ ಎನರ್ಜಿ ಕ್ರಿಯೇಷನ್ ಲಿ.** ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಸರ್ಕಾರದ ಆದೇಶಾನುಸಾರ ಪಾವತಿಸಬೇಕಾದ ಸಾಮರ್ಥ್ಯ ಹೆಚ್ಚಳ ಶುಲ್ಕವನ್ನು ಕ್ರೆಡಲ್ ಸಂಸ್ಥೆಗೆ ಒಡಂಬಡಿಕೆ ಮಾಡಿಕೊಳ್ಳುವ ಮುಂಚೆ ಪಾವತಿಸತಕ್ಕದ್ದು.
3. **ಮೆ:: ಗ್ರೀನ್ ಇನ್ಫ್ರಾ ವಿಂಡ್ ಎನರ್ಜಿ ಕ್ರಿಯೇಷನ್ ಲಿ.** ರವರು ಉತ್ಪಾದಿಸುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟಮಾಡಲು ಅನುಮತಿಸಿದೆ.
4. ಸದರಿ ಯೋಜನೆಯನ್ನು ಆದೇಶ ಹೊರಡಿಸಿದ ದಿನಾಂಕದಿಂದ ಒಂದು ವರ್ಷದೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು. ಇಲ್ಲದಿದ್ದಲ್ಲಿ ಈ ಆದೇಶವು ತಂತಾನೇ ರದ್ದಾಗುವುದು.
5. ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

H. R. [signature]
(ಹೆಚ್.ಆರ್.ನಾಗೇಂದ್ರ)
ಸರ್ಕಾರದ ಉಪ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.
ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3. ಉಪ ಅರಣ್ಯ ಸಂರಕ್ಷಣಾಧಿಕಾರಿ ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
10. M/s. Four EF Wind Power (P) Ltd, Flat No-1-B, No.9, Lucelle Court, Berlie Street, Langford Town, Bangalore-560 025.
11. M/s. Green Infra Wind Energy Creation Ltd, NBCC Plaza, Tower II, 2nd Floor, Pushp vihar, Sec. V, Saket, New Delhi-110 017.
12. ರಾಜ್ಯ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

Copy Attested under RTI
Asst. Public Information Officer
KREDL